**ಕರ್ನಾಟಕ ಸರ್ಕಾರ**

ಸಂಖ್ಯೆ: ಕಾಇ 582 ಎಲ್‌ಇಟಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 10/11/2022

**ಇವರಿಂದ:**
ಸರ್ಕಾರದ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ,
ವಿಕಾಸಸೌಧ, ಬೆಂಗಳೂರು.

**ಇವರಿಗೆ:**
ಆಯುಕ್ತರು,
ಕಾರ್ಮಿಕ ಇಲಾಖೆ
ಬನ್ನೇರುಘಟ್ಟ ರಸ್ತೆ, ಬೆಂಗಳೂರು.

ಮಾನ್ಯರೇ,

**ವಿಷಯ:-** 2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ (ಆಶಾದೀಪ ಯೋಜನೆ) ಸೊಸೈಟಿಯು ಜಾರಿಗೊಳಿಸುತ್ತಿರುವ ಆಶಾದೀಪ ಯೋಜನೆಯ ಕ್ರಿಯಾಯೋಜನೆಯನ್ನು ಅನುಮೋದಿಸುವ ಬಗ್ಗೆ.

**ಉಲ್ಲೇಖ:** ತಮ್ಮ ಕಛೇರಿಯ ಪತ್ರ ಸಂಖ್ಯೆ: ಅಸಂಕಾ/ಆಯವ್ಯಯ/ಸಿಆರ್-05/2021-22,ದಿನಾಂಕ 13/09/2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಪ್ರಸ್ತಾಪಿಸಿರುವಂತೆ, 2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ (ಆಶಾದೀಪ ಯೋಜನೆ) ಸೊಸೈಟಿಯು ಜಾರಿಗೊಳಿಸುತ್ತಿರುವ ಆಶಾದೀಪ ಯೋಜನೆಯ ಲೆಕ್ಕ ಶೀರ್ಷಿಕೆ 2230-01-101-0-05 (059) ರಡಿ ಸರ್ಕಾರದಿಂದ ಹಂಚಿಕೆಯಾಗಿರುವ ಅನುದಾನದ ಮೊತ್ತ ರೂ.250.00 ಲಕ್ಷಗಳ ಅನುದಾನ ಹಾಗೂ ಹಿಂದಿನ ಸಾಲುಗಳಲ್ಲಿ ಬಿಡುಗಡೆಯಾದ ಅನುದಾನದ ಮೇಲೆ ಅರ್ಜಿತವಾದ ಬಡ್ಡಿ ಮೊತ್ತ ರೂ.178.14 ಲಕ್ಷಗಳನ್ನು ಸೇರಿಸಿ, ಲಭ್ಯವಿರುವ ಒಟ್ಟು ರೂ. 428.14 ಲಕ್ಷಗಳ ಅನುದಾನವನ್ನು ಬಳಸಿಕೊಳ್ಳುವ ಕ್ರಿಯಾಯೋಜನೆಗೆ ಈ

ಕೆಳಕಂಡಂತೆ ಸರ್ಕಾರದ ಅನುಮೋದನೆ ನೀಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

| ಕ್ರ. ಸಂ. | ಉದ್ದೇಶ | ಗುರಿ | ಮೊತ್ತ (ಲಕ್ಷಗಳಲ್ಲಿ) |
|---|---|---|---|
| 1. | ಮಾಲೀಕರು ಪಾವತಿಸುವ ಇ. ಎಸ್. ಐ. ಮತ್ತು ಇ. ಪಿ.ಎಫ್ ವಂತಿಕೆ ಮರುಪಾವತಿ | 150 | 54.00 |
| 2 | (ಅ) ಅಪ್ರೆಂಟಿಸ್ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳ ಶಿಷ್ಯವೇತನ ಮರುಪಾವತಿ | 100 | 60.00 |
| | (ಆ) ಮಹಿಳಾ ಅಭ್ಯರ್ಥಿಗಳಿಗೆ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ | 328 | 50.00 |
| 3 | ಅಪ್ರೆಂಟಿಸ್ ತರಬೇತಿ ನಂತರ ಅದೇ ಅಭ್ಯರ್ಥಿಗಳನ್ನು ಖಾಯಂ ಆಗಿ ನೇಮಕ ಮಾಡಿದಲ್ಲಿ ವೇತನ ಮರುಪಾವತಿ | 16 | 14.14 |
| 4 | ತಂತ್ರಾಂಶ ಅಭಿವೃದ್ಧಿ ಹಾಗೂ ಸಾಮಾಜಿಕ ಜಾಲತಾಣ ನಿರ್ವಹಣೆ | - | 33.00 |
| 5. | ಮಾಹಿತಿ, ಶಿಕ್ಷಣ ಹಾಗೂ ಸಂವಹನಾ ಚಟುವಟಿಕೆಗಳು | - | 40.00 |
| 6. | ಸಿಬ್ಬಂದಿಗಳ ವೇತನ/ ಸಹಾಯವಾಣಿ ಸಿಬ್ಬಂದಿಗಳ ವೇತನ/ ಸೊಸೈಟಿಯ ಆಡಳಿತಾತ್ಮಕ ವೆಚ್ಚ | 18+5 | 177.00 |
| | (ನಾಲ್ಕು ಕೋಟಿ ಇಪ್ಪತ್ತ ಎಂಟು ಲಕ್ಷದ ಹದಿನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಒಟ್ಟು | | 428.14 |

(**ಮಾನ್ಯ ಇಲಾಖಾ ಸಚಿವರಿಂದ ಅನುಮೋದಿಸಲ್ಪಟ್ಟಿದೆ**)

ತಮ್ಮ ನಂಬುಗೆಯ,

10/11/2022

(**ಎಸ್. ಎಜಾಸ್ ಪಾಷ**)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

**ಪ್ರತಿ ಮಾಹಿತಿಗಾಗಿ:**

1. ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
2. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.